# ನಿರ್ದೇಶಕರ ಕಛೇರಿ,
# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

**1ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-560001**

**ಸಂಖ್ಯೆ: ಮಮಅಇ/ಪತ್ರಿಕಾಪ್ರಕಟಣೆ/2025-26** **ದಿನಾಂಕ: 09-02-2026.**

## ಪತ್ರಿಕಾ ಪ್ರಕಟಣೆ

ಭಾರತ ಸರ್ಕಾರವು ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಮಕ್ಕಳ ಹಕ್ಕುಗಳ ಉಲ್ಲಂಘನೆ ಅಥವಾ ಮಕ್ಕಳ ವಿರುದ್ಧ ಆಪಾದನೆಗಳ ತ್ವರಿತ ವಿಲೇವಾರಿಗೆ ಮಕ್ಕಳ ನ್ಯಾಯಾಲಯವನ್ನು ಸ್ಥಾಪಿಸಲು ಮಕ್ಕಳ ಹಕ್ಕುಗಳ ರಕ್ಷಣೆಯ ಅಧಿನಿಯಮ-2005ನ್ನು ಜಾರಿಗೆ ತಂದಿದ್ದು, ಪ್ರಕರಣ 17(1)ರಂತೆ ದಿನಾಂಕ: 27-09-2007ರ ಸರ್ಕಾರಿ ಆದೇಶದನ್ವಯ ಮಕ್ಕಳ ಹಕ್ಕುಗಳ ರಕ್ಷಣೆಯ ಆಯೋಗವನ್ನು ಕರ್ನಾಟಕ ಸರ್ಕಾರವು ಸ್ಥಾಪಿಸಿದ್ದು, ಸದರಿ ಆಯೋಗಕ್ಕೆ ಅಧ್ಯಕ್ಷರು ಹಾಗೂ ಸದಸ್ಯರನ್ನು ರಾಜ್ಯ ಸರ್ಕಾರವು ನೇಮಿಸಬೇಕಾಗಿರುತ್ತದೆ. ಅಧ್ಯಕ್ಷರ ಮತ್ತು ಸದಸ್ಯರ ಅವಧಿಯು 3 ವರ್ಷದ್ದಾಗಿದ್ದು, ಅಧ್ಯಕ್ಷರ ಹುದ್ದೆಗೆ ಅರ್ಜಿ ಸಲ್ಲಿಸುವವರ ವಯೋಮಿತಿ ಕನಿಷ್ಠ 40 ವರ್ಷಗಳು ಹಾಗೂ ಗರಿಷ್ಠ 65 ವರ್ಷದೊಳಗಿರಬೇಕು ಹಾಗೂ ಸದಸ್ಯರ ಹುದ್ದೆಗೆ ಅರ್ಜಿ ಸಲ್ಲಿಸುವವರ ವಯೋಮಿತಿ ಕನಿಷ್ಠ 35 ವರ್ಷಗಳು ಹಾಗೂ ಗರಿಷ್ಠ 60 ವರ್ಷದೊಳಗಿರಬೇಕು.

ಮಕ್ಕಳ ಹಕ್ಕುಗಳು, ರಕ್ಷಣೆ ಮತ್ತು ಮಕ್ಕಳ ಹಕ್ಕುಗಳನ್ನು ಪ್ರತಿಪಾದಿಸುವಲ್ಲಿ (Advocacy) ಈ ಕ್ಷೇತ್ರಗಳಲ್ಲಿ ಕನಿಷ್ಠ 10 ವರ್ಷ ಅನುಭವ ಹೊಂದಿರಬೇಕು. ಅಧ್ಯಕ್ಷರು ಹಾಗೂ ಸದಸ್ಯರ ಎರಡು ಹುದ್ದೆಗಳಿಗೆ ಅರ್ಜಿ ಸಲ್ಲಿಸುವವರು, ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು.

ಆಸಕ್ತರು ನಿಗದಿತ ನಮೂನೆಯನ್ನು ಭರ್ತಿ ಮಾಡಿ ಅರ್ಜಿಯನ್ನು ಮುಚ್ಚಿದ ಲಕೋಟೆಯಲ್ಲಿ ದಿನಾಂಕ: 09-03-2026ರೊಳಗೆ, ಮುದ್ದಾಂ ಅಥವಾ ಅಂಚೆ ಮೂಲಕ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಕಚೇರಿಗೆ ಸಲ್ಲಿಸಬಹುದಾಗಿರುತ್ತದೆ (ಅರ್ಜಿ ನಮೂನೆ ಹಾಗೂ ಹಾಗೂ ಹೆಚ್ಚಿನ ಮಾಹಿತಿ ಆಯೋಗದ Website http:/www.kscpcr.karnataka.gov.in ಹಾಗೂ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ Website http:/www.dwcd.karnataka.gov.in ನಲ್ಲಿ ಲಭ್ಯವಿದೆ).

**ಆಯೋಗದ ವಿಳಾಸ ಮತ್ತು ದೂರವಾಣಿ ಸಂಖ್ಯೆ ಈ ಕೆಳಕಂಡಂತಿರುತ್ತದೆ.**
**ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ**
**4ನೇ ಮಹಡಿ, ಕೃಷಿ ಭವನ, ಕಿತ್ತೂರು ರಾಣಿ ಚೆನ್ನಮ್ಮ ವೃತ್ತ (ಹಡ್ಸನ್ ವೃತ್ತ),**
**ಬೆಂಗಳೂರು-560002. ದೂರವಾಣಿ: 080-22115291/92**

ಸಹಿ/- ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು

ವಾ.ಸಾ.ಸಂ.ಇ/ವಾಪ್ರ/5507/ಆಕಾರ್/2025-26